**Akashvani : Bangalore**
**Regional Bulletin In Kannada**
**28.09.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**28.09.2025 / 2.30 pm**

**<><*<><>*><>**

<u>ಮುಖ್ಯಾಂಶಗಳು</u>

೧. ಮನ್ ಕೀ ಬಾತ್‌ನಲ್ಲಿ ದಿವಂಗತ ಎಸ್.ಎಲ್.ಭೈರಪ್ಪ ಸ್ಮರಿಸಿದ ಪ್ರಧಾನಿ; ಕೃತಿಗಳನ್ನು ಓದುವಂತೆ ಕರೆ

೨. ಉತ್ತರ ಕರ್ನಾಟಕದ ಕೃಷ್ಣ, ಭೀಮಾ ನದಿ ತೀರದಲ್ಲಿ ಪ್ರವಾಹ; ತುರ್ತು ಪರಿಹಾರ ಕಾರ್ಯಕ್ಕೆ ಮುಖ್ಯಮಂತ್ರಿ ಸೂಚನೆ

೩. ರಾಜ್ಯದಲ್ಲಿ ಮುಂದುವರೆದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ: ದಾವಣಗೆರೆಯಲ್ಲಿ ಮೂವರು ಶಿಕ್ಷಕರ ಅಮಾನತು

೪. ರಾಜ್ಯದ ಹಲವೆಡೆ ಇಂದು ಧಾರಾಕಾರ ಮಳೆ; ಉತ್ತರ ಒಳನಾಡು, ಕರಾವಳಿ ಭಾಗದಲ್ಲಿ ಯಲ್ಲೋ ಅಲರ್ಟ್

*****************

ಛತ್ ಪೂಜೆಯನ್ನು ಯುನೆಸ್ಕೋದ ಅಮೂರ್ತ ಸಾಂಸ್ಕೃತಿಕ ಪರಂಪರೆಯ ಪಟ್ಟಿಯಲ್ಲಿ ಸೇರಿಸಲು ಭಾರತ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮನ್ ಕೀ ಬಾತ್ ನ ೧೨೬ನೇ ಸಂಚಿಕೆಯಲ್ಲಿ ತಿಳಿಸಿದ್ದಾರೆ. ಛತ್ ಪೂಜೆಯನ್ನು ಯುನೆಸ್ಕೋ ಪಟ್ಟಿಯಲ್ಲಿ ಸೇರಿಸಿದಾಗ, ಪ್ರಪಂಚದ ಪ್ರತಿಯೊಂದು ಮೂಲೆಯಲ್ಲಿರುವ ಜನರು ಅದರ ಭವ್ಯತೆ ಮತ್ತು ದೈವತ್ವವನ್ನು ಅನುಭವಿಸಲು ಸಾಧ್ಯವಾಗುತ್ತದೆ ಎಂದಿದ್ದಾರೆ. ತಮ್ಮ ದೈನಂದಿನ ಜೀವನದಲ್ಲಿ 'ಸ್ವದೇಶಿ' ಅಳವಡಿಸಿಕೊಳ್ಳಲು ಪ್ರಧಾನಿ ಮೋದಿ ಪುನರುಚ್ಚರಿಸಿದ್ದಾರೆ. ಅಕ್ಟೋಬರ್ ೨ ರಂದು ಖಾದಿ ಉತ್ಪನ್ನಗಳನ್ನು ಖರೀದಿಸಲು ಜನರಲ್ಲಿ ಮನವಿ ಮಾಡಿದ್ದಾರೆ.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ ( 24 ಸೆಕೆಂಡುಗಳು)**

*****************

ಇಂದಿನ ಮನ್ ಕೀ ಬಾತ್ ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮಹಾನ್ ವಿಚಾರವಾದಿ, ಚಿಂತಕ ದಿವಂಗತ ಡಾ.ಎಸ್.ಎಲ್.ಭೈರಪ್ಪ ಅವರನ್ನು ಸ್ಮರಿಸಿದ್ದಾರೆ. ಯುವಜನತೆ ಅವರ ಕೃತಿಗಳನ್ನು ಓದಬೇಕೆಂದು ಮನವಿ ಮಾಡಿದ್ದಾರೆ. ದೇಶವು ಕೆಲವೇ ದಿನಗಳ ಹಿಂದೆ ಮಹಾನ್ ವಿಚಾರವಾದಿ, ಮತ್ತು ಚಿಂತಕ ಡಾ. ಎಸ್. ಎಲ್. ಭೈರಪ್ಪ ಅವರನ್ನು ಕಳೆದುಕೊಂಡಿತು. ಭೈರಪ್ಪ ಅವರೊಂದಿಗೆ ವೈಯಕ್ತಿಕ ಸಂಪರ್ಕ ಹೊಂದಿದ್ದ ತಾವು ಹಲವಾರು ಸಂದರ್ಭಗಳಲ್ಲಿ ವಿವಿಧ ವಿಷಯಗಳ ಕುರಿತು ಗಂಭೀರ ಮಾತುಕತೆಗಳನ್ನು ನಡೆಸಿದ್ದೇವೆ. ಎಸ್.ಎಲ್. ಭೈರಪ್ಪ ಅವರಿಗೆ ಹೃತ್ಪೂರ್ವಕ ಶ್ರದ್ಧಾಂಜಲಿ ಸಲ್ಲಿಸುತ್ತೇನೆ ಎಂದು ಪ್ರಧಾನಿ ತಿಳಿಸಿದ್ದಾರೆ.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ ( 34 ಸೆಕೆಂಡುಗಳು)**

*****************

ಗುಲ್ಬರ್ಗ, ಬಿಜಾಪುರ ಯಾದಗಿರಿ ಸೇರಿದಂತೆ ಬೀದರ್ ಜಿಲ್ಲೆಯಲ್ಲಿ ಸಂಭವಿಸಿದ ಪ್ರವಾಹದ ಪರಿಸ್ಥಿತಿ ಹಿನ್ನೆಲೆಯಲ್ಲಿ ಅಗತ್ಯ ರಕ್ಷಣಾ ಮತ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ನಾಲ್ಕೂ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು ಮತ್ತು ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ  ಸೂಚಿಸಿದ್ದಾರೆ. ಕಲ್ಬುರ್ಗಿ ಜಿಲ್ಲೆಯಲ್ಲಿ ತೀವ್ರ ನಿಗಾವಹಿಸಿ, ಅಗತ್ಯ ರಕ್ಷಣಾ ಮತ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಕಂದಾಯ ಸಚಿವ ಕೃಷ್ಣಬೈರೇಗೌಡ ಮತ್ತು  ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಹಾಗೂ ಕಲ್ಬುರ್ಗಿ ಜಿಲ್ಲಾಧಿಕಾರಿಗಳಿಗೂ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾಪಂಚಾಯತ್ ಕಾರ್ಯ ನಿರ್ವಾಹಣಾಧಿಕಾರಿಗಳು  ಪ್ರವಾಹ ಪೀಡಿತ ಪ್ರದೇಶಗಳಿಗೆ ಖುದ್ದು ಭೇಟಿ ನೀಡಿ ತುರ್ತು ಕ್ರಮ ಕೈಗೊಳ್ಳಬೇಕು.  ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಕ್ಷಣ ಜಿಲ್ಲೆಗೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿ ಅಗತ್ಯ ಕ್ರಮ ಕೈಗೊಳ್ಳಲು ಜಿಲ್ಲಾಡಳಿತಕ್ಕೆ ಸೂಚನೆಗಳನ್ನು ನೀಡಬೇಕು. ಗ್ರಾಮೀಣಾಭಿವೃದ್ಧಿ ಇಲಾಖೆ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿಗಳು ಸ್ಥಳಕ್ಕೆ ಭೇಟಿ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

*****************

ಕಲಬುರಗಿ ಜಿಲ್ಲೆಯಾದ್ಯಂತ ಭಾರೀ ಮಳೆಯಿಂದಾಗಿ ಪ್ರವಾಹ ಪರಿಸ್ಥಿತಿ ಉಂಟಾಗಿದೆ. ಸೇಡಂ ತಾಲೂಕಿನ ಮಳಖೇಡ ಗ್ರಾಮದ ಬಳಿ ಕಾಗಿಣಾ ನದಿ ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಬೃಹತ್ ಸೇತುವೆಯೊಂದು ಜಲಾವೃತಗೊಂಡಿದೆ. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದೆ.

ಜಯತೀರ್ಥರ ಮೂಲ ಬೃಂದಾವನ, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ನೀರು ನುಗ್ಗಿದ್ದು, ಜನರನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸಲಾಗಿದೆ. ಮಹಾರಾಷ್ಟ್ರದ ಹಲವು ಜಲಾಶಯಗಳಿಂದ ಭೀಮಾನದಿಗೆ ೩.೫೦ ಲಕ್ಷ ಕ್ಯೂಸೆಕ್ ಗೂ ಅಧಿಕ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡಲಾಗಿದೆ. ಇದರಿಂದಾಗಿ ಭೀಮಾ ತೀರದ ಸಾವಿರಾರು ಹೆಕ್ಟೇರ್ ಪ್ರದೇಶಗಳು ಜಲಾವೃತವಾಗಿವೆ. ವಿಜಯಪುರ ಜಿಲ್ಲೆಯ ಭೀಮಾನದಿ ಪ್ರವಾಹಕ್ಕೆ ಒಳಗಾಗಿರುವ ಸಿಂದಗಿ ಕ್ಷೇತ್ರದ ವಿವಿಧ ಗ್ರಾಮಗಳಿಗೆ ಶಾಸಕ ಅಶೋಕ ಮನಗೂಳಿ, ವಿಜಯಪುರ ಜಿಲ್ಲಾಧಿಕಾರಿ ಡಾ.ಆನಂದ ಕೆ. ಹಾಗೂ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಂತ್ರಸ್ಥರ ಸಮಸ್ಯೆಗಳನ್ನು ಆಲಿಸಿದರು. ಪ್ರವಾಹ ಪೀಡಿತ ವಿವಿಧ ಗ್ರಾಮಗಳಿಗೆ ಭೇಟಿ ನೀಡಿದ ಅವರು, ಪ್ರವಾಹಕ್ಕೊಳಗಾಗಿರುವ ಪ್ರದೇಶಗಳಲ್ಲಿ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

*****************

ರಾಜ್ಯದ ವಿವಿಧೆಡೆ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಜನತೆಯ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ನಡೆಸಲಾಗುತ್ತಿರುವ ಸಮೀಕ್ಷೆ ಮುಂದುವರೆದಿದೆ. ಉತ್ತರಕನ್ನಡ ಜಿಲ್ಲೆಯಲ್ಲಿ ಇದುವರೆಗೆ ೪೪ ಸಾವಿರದ ೪೬೪ ಮನೆಗಳ ಸಮೀಕ್ಷೆ ಪೂರ್ಣಗೊಳಿಸಿದೆ. ಈ ಸಮೀಕ್ಷೆ ಕಾರ್ಯಕ್ಕಾಗಿ ಜಿಲ್ಲೆಯಲ್ಲಿ ೨ ಸಾವಿರದ ೯೧೬ ಬ್ಲಾಕ್ ರಚಿಸಲಾಗಿದ್ದು,೩ ಸಾವಿರದ ೫೬ ಗಣತಿದಾರರನ್ನು ನಿಯೋಜಿಸಲಾಗಿದೆ. ಒಟ್ಟು ೩ ಲಕ್ಷದ ೨೬ ಸಾವಿರದ ೮೬೦ ಮನೆಗಳನ್ನು ಸಮೀಕ್ಷೆ ಮಾಡುವ ಗುರಿ ಹೊಂದಲಾಗಿದೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಪ್ರಗತಿಯಲ್ಲಿ ಹಾವೇರಿ ಜಿಲ್ಲೆ ಮೊದಲ ಸ್ಥಾನದಲ್ಲಿದ್ದು, ಜಿಲ್ಲೆಯ ಗಣತಿದಾರರ ಕೆಲಸಕ್ಕೆ ಮೆಚ್ಚುಗೆ ವ್ಯಕ್ತವಾಗುತ್ತಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಭಾಗವಹಿಸದೇ ಕರ್ತವ್ಯಲೋಪ ಎಸಗಿರುವ ಆರೋಪದ ಮೇರೆಗೆ ಇಬ್ಬರು ಶಿಕ್ಷಕರು ಸೇರಿದಂತೆ ಮೂವರನ್ನು ಸೇವೆಯಿಂದ ಅಮಾನತುಗೊಳಿಸಿ ದಾವಣಗೆರೆ ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ಆದೇಶಿಸಿದ್ದಾರೆ. ಸೆಪ್ಟೆಂಬರ್ ೨೨ ಅಕ್ಟೋಬರ್ ೭ ರವರೆಗೆ ಸಮೀಕ್ಷಾ ಕಾರ್ಯಕೈಗೊಳ್ಳಲು ಆದೇಶಿಸಲಾಗಿದ್ದು, ಸದರಿ ನೌಕರರು ಸಮೀಕ್ಷಾ ಕಾರ್ಯಕ್ಕೆ ಗೈರು ಹಾಜರಾಗಿದ್ದರು, ಈ ಸಂಬಂಧ ಕಾರಣ ಕೇಳಿ ನೀಡಿದ್ದ ನೋಟಿಸಿಗೂ ಉತ್ತರ ನೀಡದ ಹಿನ್ನೆಲೆಯಲ್ಲಿ ಮೂವರು ನೌಕರರ ವಿರುದ್ಧ ಇಲಾಖಾ

ವಿಚಾರಣೆಯನ್ನು ಕಾಯ್ದಿರಿಸಿ ತಕ್ಷಣದಿಂದಲೇ ಸೇವೆಯಿಂದ ಅಮಾನತುಗೊಳಿಸಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

*****************

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಸರ್ಕಾರವು ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು, ಈ ವಿಶೇಷ ಸರಣಿ - 'ಸೇವಾ ಪರ್ವ್' ನಲ್ಲಿ, ಪ್ರಧಾನಿ ಕಿಸಾನ್ ಸಮ್ಮಾನ್ ನಿಧಿಯ ಮೂಲಕ ಮೋದಿ ಸರ್ಕಾರವು ದೇಶದ ರೈತರನ್ನು ಹೇಗೆ ಸಬಲೀಕರಣಗೊಳಿಸಿದೆ ಎಂಬುದರ ಬಗ್ಗೆ ಒಂದು ವರದಿ.

**ಧ್ವನಿ : ವಿಮಲಾಕ್ಷಿ ( ೩೦ ಸೆಕೆಂಡುಗಳು)**

**(ಭಾರತವು ಶತಮಾನಗಳಿಂದ ಕೃಷಿ ಭೂಮಿಯಾಗಿದೆ, ಇಂದಿಗೂ, ದೇಶದ ಜನಸಂಖ್ಯೆಯ ಬಹುಪಾಲು ಭಾಗವು ತಮ್ಮ ಜೀವನೋಪಾಯಕ್ಕಾಗಿ ಕೃಷಿಯನ್ನು ಅವಲಂಬಿಸಿದೆ. ಆದಾಗ್ಯೂ, ನಮ್ಮ ಧಾನ್ಯಗಳನ್ನು ಧಾನ್ಯದಿಂದ ತುಂಬಿಸುವ ರೈತರು ಅನೇಕ ಸವಾಲುಗಳನ್ನು ಎದುರಿಸುತ್ತಾರೆ. ಅವರ ಹೋರಾಟಗಳನ್ನು ಅರ್ಥಮಾಡಿಕೊಂಡ ಪ್ರಧಾನಿ ನರೇಂದ್ರ ಮೋದಿ ಅವರು ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ಘೋಷಿಸುವ ಮೂಲಕ ಸಹಾಯ ಹಸ್ತ ಚಾಚಿದ್ದಾರೆ. ಉತ್ತರ ಪ್ರದೇಶದ ಗೋರಖ್‌ಪುರದಲ್ಲಿ ಫೆಬ್ರವರಿ ೨೪, ೨೦೧೯ ರಂದು ಈ ಯೋಜನೆಯನ್ನು ಪ್ರಧಾನಿ ಉದ್ಘಾಟಿಸಿದರು.** )

*****************

ರಾಜ್ಯದ ಹಲವೆಡೆ ಇಂದು ಮಳೆಯಾಗುವ ಮುನ್ಸೂಚನೆ ಇದೆ. ಉತ್ತರ ಒಳನಾಡು, ಕರಾವಳಿ ಭಾಗದಲ್ಲಿ ಅಧಿಕ ಮಳೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ. ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಬೆಂಗಳೂರಿನಲ್ಲೂ ಸಂಜೆಯ ವೇಳೆ ಸಾಧಾರಣ ಪ್ರಮಾಣದಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಘಂಟೆಗೆ ೩೦ ರಿಂದ ೪೦ ಕಿಲೋ ಮೀಟರ್ ವೇಗದಲ್ಲಿ ಗಾಳಿ ಬೀಸಲಿದ್ದು, ಮೀನುಗಾರರು ಸಮುದ್ರಕ್ಕಿಳಿಯದಂತೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

*****************

ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಇಂದು ಅಖಿಲ ಕರ್ನಾಟಕ ಕುವೆಂಪು ಸಾಂಸ್ಕೃತಿಕ ವೇದಿಕೆ ವತಿಯಿಂದ ಕುವೆಂಪು ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಐಸಿಎಆರ್ -ಐಐಹೆಚ್‌ಆರ್ ನಿವೃತ್ತ ಪ್ರಧಾನ ವಿಜ್ಞಾನಿ ಡಾ. ಬಿ.ನಾರಾಯಣಸ್ವಾಮಿ ಮತ್ತು ಬೆಂಗಳೂರು ಪೂರ್ವ ವಿಭಾಗದ ಉಪ ಪೊಲೀಸ್ ಆಯುಕ್ತ ಡಿ.ದೇವರಾಜ್ ಅವರಿಗೆ ವಿಶ್ವ ಚೇತನ ಪ್ರಶಸ್ತಿ ಪ್ರದಾನ ಮಾಡಲಾಗುವುದು.

****************